# ಕರ್ನಾಟಕ ಸರ್ಕಾರದ ನಡೆವಳಿಗಳು

ವಿಷಯ: ಎಸ್‌ಜಿಎಸ್‌ವೈಯಡಿ 2012–13ನೇ ಸಾಲಿನಲ್ಲಿ ರಾಜ್ಯದ ಜಿಲ್ಲಾ ಪಂಚಾಯತಿಗಳಿಗೆ ರಾಜ್ಯದ ಪಾಲಿನ 1ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ನವದೆಹಲಿ ಎಫ್‌ಟಿಎಸ್ ಫೈಲ್ ನಂ. 18080/2012 ಸಂಖ್ಯೆ:ಜಿ–20011/2/2012 ಎಸ್‌ಜಿಎಸ್‌ವೈ(1) ದಿನಾಂಕ 11.04.2012.
2. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ನವದೆಹಲಿ ಪತ್ರ ಸಂಖ್ಯೆ:ಜೆ–1106077/2012 ಎಸ್‌ಜಿಎಸ್‌ವೈ I (12) ದಿನಾಂಕ 01.06.2012.
3. ಕೇಂದ್ರ ಸರ್ಕಾರದ ಅನುದಾನ ಜಮೆ ದಿನಾಂಕ 18.06.2012.
4. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ನವದೆಹಲಿಯ ಆರ್‌ಎಲ್ – ಎಫ್‌ಟಿಎಸ್ 19407 ದಿನಾಂಕ 05.07.2012.
5. ಆರ್ಥಿಕ ಇಲಾಖೆ [ವೆಚ್ಚ–6], ಬೆಂಗಳೂರು, ಇವರ ಅನುಮೋದನೆ ಸಂಖ್ಯೆ:ಆಇ 366 ವೆ –06/2012 ದಿನಾಂಕ 26–09–2012.
6. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 24 ಎಸ್‌ಜಿವೈ 2012 [ಎ1] ಬೆಂಗಳೂರು ದಿನಾಂಕ 10.08.2012.

–:0:–

ಪ್ರಸ್ತಾವನೆ:

ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯು (ಎಸ್‌ಜಿಎಸ್‌ವೈ) ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಯೋಜನೆಯ ಮಾರ್ಗಸೂಚಿಯಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಅನುದಾನವನ್ನು 75 : 25 ರ ಅನುಪಾತದಲ್ಲಿ ಭರಿಸಬೇಕಾಗಿದೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ಓದಲಾಗಿದೆ (1)ರಲ್ಲಿ ಎಸ್‌ಜಿಎಸ್‌ವೈ / ಎನ್‌ಆರ್‌ಎಲ್‌ಎಂ ಯೋಜನೆ ಅನುಷ್ಠಾನಕ್ಕಾಗಿ ರೂ.1,17,02,67,000/- ಹಂಚಿಕೆ ಮಾಡಿದೆ. ಈ ಪೈಕಿ ಕೇಂದ್ರದ ಪಾಲು ರೂ.87,77,00,000/- ಹಾಗೂ ರಾಜ್ಯದ ಪಾಲು ರೂ.29,25,67,000/-. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ಓದಲಾಗಿದೆ (2) ಮತ್ತು (4) ರನ್ವಯ ರಾಜ್ಯದ 25 ಜಿಲ್ಲಾ ಪಂಚಾಯತ್‌ಗಳಿಗೆ ರೂ.3,81,29,000/- ಅನುದಾನ ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯದ ಪಾಲಿನ ಅನುದಾನ ರೂ.12,70,10,000/- ಬಿಡುಗಡೆ ಮಾಡಬೇಕಾಗಿದೆ. ಆದರೆ, 2012–13ನೇ ಸಾಲಿಗೆ ರಾಜ್ಯದ ಆಯವ್ಯಯದಲ್ಲಿ ಎಸ್‌ಜಿಎಸ್‌ವೈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಮಾಡಲು ಯಾವುದೇ ಅನುದಾನವನ್ನು ಕಾಯ್ದಿರಿಸಿರುವುದಿಲ್ಲ. ಏಕೆಂದರೆ, ಕೇಂದ್ರ ಸರ್ಕಾರ 2012–13 ನೇ ಸಾಲಿಗೆ ಎಸ್‌ಜಿಎಸ್‌ವೈ ಯೋಜನೆಯ ಬದಲಿಗೆ ಆಜೀವಿಕ (ಎನ್‌ಆರ್‌ಎಲ್‌ಎಂ) ಜಾರಿಗೆ ಬರುವುದಾಗಿ ತಿಳಿಸಿದ್ದರಿಂದ ಪ್ರಧಾನ ಲೆಕ್ಕ ಶೀರ್ಷಿಕೆ "2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು–198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ–6 ಗ್ರಾಮ ಪಂಚಾಯತ್ ಗಳು–01–ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ (ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ) 2012–2013 ನೇ ಲಿಂಕ್ ಕೋಡ್ 2501–01–198–6–01 " (ಹೊಸ ಜಿಲ್ಲಾ ಪಂಚಾಯತಿ ಕೋಡ್ 2501–01–101–0–13) ನಲ್ಲಿ 2012–13 ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಯಾವುದೇ ಅನುದಾನ ಕಾಯ್ದಿರಿಸಿಕೊಂಡಿರುವುದಿಲ್ಲ. ಆದರೆ 2012–13ನೇ ಸಾಲಿಗೆ ಎಸ್‌ಜಿಎಸ್‌ವೈ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ರಾಜ್ಯದ 25 ಜಿಲ್ಲಾ ಪಂಚಾಯತ್‌ಗೆ 1ನೇ ಕಂತಿನ ಅನುದಾನ ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯದ ಪಾಲಿನ ಅನುದಾನವನ್ನು ಬಿಡುಗಡೆ ಮಾಡಲೇಬೇಕಾಗಿರುತ್ತದೆ. ಆದ್ದರಿಂದ ಎಸ್‌ಜಿಎಸ್‌ವೈ ಯೋಜನೆ ಬದಲಿಗೆ ಜಾರಿಗೆ ಬಂದಿರುವ ಆಜೀವಿಕ (ಎನ್‌ಆರ್‌ಎಲ್‌ಎಂ) ಪೂರ್ವಭಾವಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿರುವುದರಿಂದ, ಎನ್‌ಆರ್‌ಎಲ್‌ಎಂ ಯೋಜನೆಗಾಗಿ ಕಾಯ್ದಿರಿಸಲಾಗಿರುವ ಅನುದಾನದಿಂದ ಬಿಡುಗಡೆ ಮಾಡಬೇಕಾಗಿದೆ.

**ಎಸ್‌ಜಿಎಸ್‌ವೈ ಯೋಜನೆ ಬದಲಿಗೆ ಜಾರಿಗೆ ಬಂದಿರುವ ಆಜೀವಿಕ (ಎನ್‌ಆರ್‌ಎಲ್‌ಎಂ)** ಯೋಜನೆಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ "2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು–198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ–6 ಗ್ರಾಮ ಪಂಚಾಯತ್‌ಗಳು–01–ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ

(ನ್ಯಾಷನಲ್ ರೂರಲ್ ಲೈವ್ಲಿ ಹುಡ್ ಪ್ರಾಜೆಕ್ಟ್ (ಎನ್‌ಆರ್‌ಎಲ್‌ಎಂ)) 2012-2013 ನೇ ಲಿಂಕ್ ಕೋಡ್ 2501-01-198-6-01 " (ಹೊಸ ಕೋಡ್ 2501-00-101-0-05) ನಲ್ಲಿ 2012-13 ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಒಟ್ಟಾರೆ ಅನುದಾನ ಬಿಡುಗಡೆಗಾಗಿ ರೂ.1,20,00,000/- ಕಾಯ್ದಿರಿಸಲಾಗಿದೆ. ಈ ಪೈಕಿ ರಾಜ್ಯದ ಪಾಲಿನ ಅನುದಾನ ಬಿಡುಗಡೆಗಾಗಿ ರೂ.3,00,00,000/- ಆರ್ಥಿಕ ಇಲಾಖೆ ಓದಲಾಗಿದೆ (5)ರಲ್ಲಿ ರಾಜ್ಯ ಜಿಲ್ಲಾ ಪಂಚಾಯತ್‌ಗಳಿಗೆ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಮಾಡಲು ರೂ.952.57 ಲಕ್ಷ ಒದಗಿಸಿದೆ. ಈ ಅನುದಾನವನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಎಲ್ಲಾ 25 ಜಿಲ್ಲಾ ಪಂಚಾತಯತ್‌ಗಳಿಗೆ ನೀಡಲು ಸಾಧ್ಯವಾಗದ ಕಾರಣ ಜಿಲ್ಲಾ ಪಂಚಾಯತ್‌ಗಳಲ್ಲಿ ಲಭ್ಯವಿರುವ ಅನುದಾನದಲ್ಲಿ ಈವರೆಗೆ ವೆಚ್ಚ ಮಾಡಿರುವುದನ್ನು ಗಣನೆಗೆ ತೆಗೆದುಕೊಂಡು ರಾಜ್ಯದ 20 ಜಿಲ್ಲಾ ಪಂಚಾಯತ್‌ಗಳಿಗೆ ರೂ.9,52,20,000/- ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಆದುದರಿಂದ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 43 ಎಸ್‌ಜೆವೈ 2012 ಬೆಂಗಳೂರು,</u>
<u>ದಿನಾಂಕ : 15.11.2012</u>

ರಾಜ್ಯ ಸರ್ಕಾರವು, ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯಡಿ (ಎಸ್‌ಜಿಎಸ್‌ವೈ) 2012-13ನೇ ಸಾಲಿಗೆ ಅನುಬಂಧದಲ್ಲಿ ತೋರಿಸಿರುವ ರಾಜ್ಯದ 20 ಜಿಲ್ಲಾ ಪಂಚಾಯತ್‌ಗಳಿಗೆ ರಾಜ್ಯದ ಪಾಲಿನ ಒಂದನೇ ಕಂತಿನ ಅನುದಾನ ರೂ.9,52,20,000/- (ರೂ. ಒಂಭತ್ತು ಕೋಟಿ ಐವತ್ತೆರಡು ಲಕ್ಷದ ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ) ಎನ್‌ಆರ್‌ಎಲ್‌ಎಂ ಅನುದಾನದಿಂದ ಭರಿಸಿ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

<u>ಷರತ್ತುಗಳು:</u>

1999 ಮೇ ತಿಂಗಳ ಎಸ್‌ಜಿಎಸ್‌ವೈ ಕೈಪಿಡಿಯ ಮಾರ್ಗಸೂಚಿಯಂತೆ ಹಣವನ್ನು ಉಪಯೋಗಿಸುವುದು. ಅನುಷ್ಠಾನ ಏಜೆನ್ಸಿಗಳಿಗೆ ಸರ್ಕಾರಿ ಆದೇಶ ತಲುಪಿದ 15 ದಿವಸದೊಳಗೆ ಬಿಡುಗಡೆ ಮಾಡತಕ್ಕದ್ದು.

ಯೋಜನೆಯ ವೆಚ್ಚವನ್ನು ಪ್ರಧಾನ ಲೆಕ್ಕ ಶೀರ್ಷಿಕೆ "2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು-198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ-6 ಗ್ರಾಮ ಪಂಚಾಯತ್‌ಗಳು-01-ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ [ನ್ಯಾಷನಲ್ ರೂರಲ್ ಲೈವ್ಲಿ ಹುಡ್ ಪ್ರಾಜೆಕ್ಟ್ (ಎನ್‌ಆರ್‌ಎಲ್‌ಎಂ)] 2012-2013 ನೇ ಲಿಂಕ್ ಕೋಡ್ 2501-01-198-6-01" (ಹೊಸ ಕೋಡ್ 2501-00-101-0-05) ಸಾಲಿನಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 7 ಜೆಡ್‌ಪಿಎ 2003 ದಿನಾಂಕ 14-07-2005 ರನ್ವಯ ಖಜಾನೆ ಯಿಂದ ಪಡೆಯುವುದು.

ಸಂಬಂಧಿಸಿದ ಜಿಲ್ಲಾ ಪಂಚಾಯತಿಯಗಳ ಮುಖ್ಯ ಲೆಕ್ಕಾಧಿಕಾರಿಗಳಿಗೆ ಖಜಾನೆಯಿಂದ ಅನುದಾನವನ್ನು ಸೆಳೆಯಲು ಕಾನೂನು ರೀತ್ಯ ಅಧಿಕಾರ ನೀಡಲಾಗಿದೆ. ಖಜಾನೆಯಿಂದ ಅನುದಾನವನ್ನು ಪೇಯೀಸ್ ರಸೀದಿ ಮೇಲೆ ಸೆಳೆಯಲು ಆರ್ಥಿಕ ಇಲಾಖೆ (ವೆಚ್ಚ-6) ಯ ಸಂಖ್ಯೆ: ಆಇ 172 ವೆಚ್ಚ-6/2011 ದಿನಾಂಕ 30-03-2011 ರಂತೆ ಸಹಮತಿಸಿದೆ. ಈ ಯೋಜನೆಯಡಿ ಕೇಂದ್ರ ಸರ್ಕಾರವು ನೇರವಾಗಿ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿರುವ ಅನುದಾನ ಮತ್ತು ರಾಜ್ಯದ ಪಾಲಿನ ಅನುದಾನವೂ ಸೇರಿದಂತೆ ಒಟ್ಟು ಅನುದಾನವನ್ನು ಸರ್ಕಾರದ ಸುತ್ತೋಲೆ ಸಂಖ್ಯೆ : ಗ್ರಾಅಪ 14 ಎಸ್‌ಜೆವೈ 2007 ದಿನಾಂಕ 18-04-2007 ರ ಸೂಚನೆಯಂತೆ ಕ್ರಮ ಕೈಗೊಳ್ಳುವುದು. ಇದಲ್ಲದೆ ಓದಲಗಾಗಿದೆ 6ರ ಆದೇಶದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಸಹ ತಪ್ಪದೆ ಪಾಲಿಸುವುದು.

ಬಿಡುಗಡೆ ಮಾಡುವ ಅನುದಾನದ ಆಂತರಿಕ ಲೆಕ್ಕ ಪರಿಶೋಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾಡುವುದು.

2012-13 ನೇ ಸಾಲಿನ ಅನುಮೋದಿತ ವಾರ್ಷಿಕ ಯೋಜನೆಯನ್ನು ಸಂಬಂಧಿಸಿದ ಜಿಲ್ಲಾ ಪಂಚಾಯತಿಯಗಳ ಯೋಜನಾ ನಿರ್ದೇಶಕರು (ಡಿಆರ್‌ಡಿಎ) ಇವರು ಸರ್ಕಾರಕ್ಕೆ ಸಲ್ಲಿಸುವುದು.

ಆರ್ಥಿಕ ಮತ್ತು ಭೌತಿಕ ಸಾಧನೆಯ ಮಾಸಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆಯ 5ನೇ ತಾರೀಖಿನೊಳಗೆ ಕೇಂದ್ರ ಸರ್ಕಾರದ online upload ಮಾಡಿ ಪ್ರತಿಯನ್ನು ಸ್ವ ಉದ್ಯೋಗ ಕಾರ್ಯಕ್ರಮಗಳ ಶಾಖೆಗೆ ತಪ್ಪದೇ ಕಳುಹಿಸುವುದು.

ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು ಹಣ ಉಪಯೋಗ ಪ್ರಮಾಣ ಪತ್ರ ಹಾಗೂ ಆಡಿಟ್ ಮಾಡಿದ ಲೆಕ್ಕಗಳನ್ನು ನಿರ್ದೇಶಕರು (ಸ್ವಉಕಾ) ಹಾಗೂ ಪ.ನಿ. ಸರ್ಕಾರದ ಉಪ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ತಪ್ಪದೇ ಕಳುಹಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಸಹಮತಿ ಸಂಖ್ಯೆ :ಗ್ರಾಅಪ 132 ಪಿಬಿಎಸ್ 2012 ದಿನಾಂಕ 13.11.2012 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ದೀಪ)
ನಿರ್ದೇಶಕರು (ಸ್ವಉಕಾ) ಹಾಗೂ
ಪ.ನಿ. ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ. (ಎರಡು ಪ್ರತಿಗಳು)

ಪ್ರತಿ:

1. ಮಹಾಲೇಖಪಾಲರು,ಕರ್ನಾಟಕ, ಬೆಂಗಳೂರು
2. ನಿರ್ದೇಶಕರು (ಎಸ್‌ಜಿಎಸ್‌ವೈ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಕೃಷಿಭವನ, ನವದೆಹಲಿ.
3. ಶಾಖಾಧಿಕಾರಿ (ಎಸ್‌ಜಿಎಸ್‌ವೈ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಕೃಷಿ ಭವನ, ನವದೆಹಲಿ.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಸಂಬಂಧಿಸಿದ ರವರ ಮಾಹಿತಿಗಾಗಿ
5. ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿಗಾಗಿ
6. ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಿಗೆ ಮಾಹಿತಿಗಾಗಿ
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿವಿ ಟವರ್, ಬೆಂಗಳೂರು–560 001.
8. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, 2ನೇ ಮಹಡಿ, ಖನಿಜ ಭವನ (ಸರ್ಕಾರಿ ಬ್ಲಾಕ್) ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಸಂಬಂಧಿಸಿದ ಜಿಲ್ಲೆಯ ಖಜಾನಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
10. ಸಮಾವೇಶಕರು, ಎಸ್‌ಎಲ್‌ಬಿಸಿ, ಸಿಂಡಿಕೇಟ್ ಬ್ಯಾಂಕ್, ಕಾರ್ಪೋರೇಟ್ ಆಫೀಸ್, 5ನೇ ಮಹಡಿ,2ನೇ ಕ್ರಾಸ್, ಗಾಂಧಿನಗರ, ಬೆಂಗಳೂರು 560 009.
11. ಮಾನ್ಯ ಗ್ರಾಅಪಂರಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿಗಳಿಗೆ,
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
14. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ಗ್ರಾಅಪಂರಾ ಇವರ ಆಪ್ತ ಕಾರ್ಯದರ್ಶಿಗಳಿಗೆ.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮಿಷನ್ ಡೈರೆಕ್ಟರ್ ರವರ ಆಪ್ತ ಸಹಾಯಕರು, ಸಂಜೀವಿನಿ [ಕೆಎಸ್‌ಆರ್‌ಎಲ್‌ಎಂ], ನಂ.ಐ–145, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು,
17. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪಂರಾ ಇಲಾಖೆ ಇವರ ಆಪ್ತ ಸಹಾಯಕರಿಗೆ.
18. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪಂರಾ ಇಲಾಖೆ, ಬೆಂಗಳೂರು
19. ಶಾಖಾಧಿಕಾರಿ, ಪತ್ರ ಸ್ವೀಕಾರ ಮತ್ತು ರವಾನೆ ಶಾಖೆ, ಗ್ರಾ ಅ ಪಂರಾ ಇಲಾಖೆ
20. ಹೆಚ್ಚಿನ ಪ್ರತಿ.

## ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 43 ಎಸ್‌ಜೆವೈ 2012, ಬೆಂಗಳೂರು,

## ದಿನಾಂಕ 15.11.2012

(ರೂ. ಗಳಲ್ಲಿ)

| ಕ್ರ ಸಂ | ಜಿಲ್ಲಾ ಪಂಚಾಯತಿಯ ಹೆಸರು | ಜಿ.ಪಂ. ಕೋಡ್ | ಡಿ.ಡಿ.ಓ ಕೋಡ್ | ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಒಂದನೇ ಕಂತಿನ ಅನುದಾನ | ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿರುವ ಒಂದನೇ ಕಂತಿನ ಅನುದಾನ |
|---|---|---|---|---|---|
| 1 | ಬಾಗಲ ಕೋಟೆ | 461 | 2900ZZ0001 | 1,03,58,000 | 34,53,000 |
| 2 | ಬೆಂಗಳೂರು ನಗರ | 401 | 0100ZZ8001 | 44,10,000 | 14,70,000 |
| 3 | ಬೆಂಗಳೂರು (ಗ್ರಾ) | 402 | 0300ZZ8001 | 57,15,000 | 19,05,000 |
| 4 | ಬಳ್ಳಾರಿ | 418 | 3400ZZ0001 | 2,43,26,000 | 81,09,000 |
| 5 | ಬೀದರ್ | 419 | 3800ZZ5701 | 1,72,41,000 | 57,47,000 |
| 6 | ಬಿಜಾಪುರ | 414 | 2800ZZ9152 | 2,02,95,000 | 67,65,000 |
| 7 | ಚಾಮರಾಜನಗರ | 456 | 1000ZZ0001 | 2,14,81,000 | 71,60,000 |
| 8 | ಚಿಕ್ಕಮಗಳೂರು | 408 | 1800ZZ0017 | 97,55,000 | 32,52,000 |
| 9 | ಚಿಕ್ಕಬಳ್ಳಾಪುರ | 453 | 0600ZZ0001 | 1,12,83,000 | 37,61,000 |
| 10 | ಚಿತ್ರದುರ್ಗ | 403 | 1600ZZ0001 | 1,73,27,000 | 57,76,000 |
| 11 | ದಾವಣಗೆರೆ | 451 | 1700ZZ0002 | 1,39,86,000 | 46,62,000 |
| 12 | ದಕ್ಷಿಣ ಕನ್ನಡ | 409 | 1900ZZ0047 | 94,19,000 | 31,40,000 |
| 13 | ಧಾರವಾಡ | 415 | 2500ZZ8798 | 87,25,000 | 29,08,000 |
| 14 | ಗದಗ್ | 462 | 2600ZZ0001 | 1,38,48,000 | 46,16,000 |
| 15 | ಹಾಸನ | 410 | 1300ZZ0003 | 1,26,41,000 | 42,14,000 |
| 16 | ರಾಯಚೂರು | 420 | 3600ZZ0001 | 2,04,88,000 | 68,29,000 |
| 17 | ರಾಮನಗರ | 452 | 0400ZZ0001 | 1,02,33,000 | 34,11,000 |
| 18 | ಶಿವಮೊಗ್ಗ | 405 | 1400ZZ0002 | 1,74,28,000 | 58,09,000 |
| 19 | ತುಮಕೂರು | 406 | 0800ZZ0001 | 2,58,34,000 | 86,11,000 |
| 20 | ಉತ್ತರ ಕನ್ನಡ | 416 | 3000ZZ0080 | 1,08,65,000 | 36,22,000 |
| | | | ಒಟ್ಟು | 28,56,58,000 | 9,52,20,000 |

(ಎಂ.ದೀಪ)
ನಿರ್ದೇಶಕರು (ಸ್ವಉಕಾ) ಹಾಗೂ
ಪ.ನಿ. ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.